ದಿನಾಂಕ: 8–7–2009 ರಂದು ನಡೆದ ಮಂಡಳಿ ಸಭೆಯಲ್ಲಿ ಅನುಮೋದನೆಯನ್ನು ಪಡೆಯಲಾಗಿದೆ.

ಇ) ಬಸ್ ನಿಲ್ದಾಣದ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದು.

277 ಶ್ರೀ ಮಹೇಶ್ ಎಸ್.ಆರ್. (ಕೃಷ್ಣರಾಜನಗರ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಇತ್ತೀಚೆಗೆ ನಡೆದ ಅವ್ಯವಹಾರಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು? (ವಿವರಗಳನ್ನು ನೀಡುವುದು);

ಆ) ಈ ಅವ್ಯವಹಾರಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಇ) ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ತನಿಖೆಯ ಪ್ರಗತಿಯು ಯಾವ ಹಂತದಲ್ಲಿದೆ;

ಈ) ಈ ಅವ್ಯವಹಾರಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ರೀತಿ ಕ್ರಮ ಜರುಗಿಸಿದೆ;

ಉ) ಹಾಗಿಲ್ಲದಿದ್ದಲ್ಲಿ, ಅವ್ಯವಹಾರಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಯಾವಾಗ ಕ್ರಮ ಜರುಗಿಸಲಾಗುವುದು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಇತ್ತೀಚೆಗೆ ಯಾವುದೇ ಅವ್ಯವಹಾರಗಳು ನಡೆದಿರುವುದಿಲ್ಲ.

ಆ) ಮೇಲ್ಕಂಡ ಪ್ರಶ್ನೆ (ಅ)ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) –ಅದೇ–

ಈ) –ಅದೇ–

ಉ) ಅನ್ವಯಿಸುವುದಿಲ್ಲ.

543 ಶ್ರೀ ಮಂಜು.ಎ (ಅರಕಲಗೂಡು) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಕಲಗೂಡು ಪಟ್ಟಣದಲ್ಲಿ ಅಗ್ನಿಶಾಮಕ ಕೇಂದ್ರ ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭ ಮಾಡಲಾಗುವುದು?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಹೌದು.

ಆ) ಅರಕಲಗೂಡು ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆಯನ್ನು ಸ್ಥಾಪಿಸಲು ಸರ್ಕಾರದ ಆದೇಶ ಸಂ: ಒಇ 235 ಕಸೇ 2005, ದಿನಾಂಕ: 26–10–2006 ರಲ್ಲಿ ಆಡಳಿತಾತ್ಮಕ ಮಂಜೂರಾತಿಯನ್ನು ಈಗಾಗಲೇ ನೀಡಿದೆ. ಅರಕಲ ಗೂಡಿನಲ್ಲಿ ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲು ರೂ.1,92,000/ ಗಳ ಮೊತ್ತವನ್ನು ಪಾವತಿಸಿ ಕೃಷಿ ಇಲಾಖೆಯಿಂದ 2 ಎಕರೆ ಜಮೀನನ್ನು ಈಗಾಗಲೇ ಖರೀದಿಸಲಾಗಿದೆ. ಅನುದಾನ ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಂಡು ಸದರಿ ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸಲಾಗುವುದು.

545 ಶ್ರೀ ಮಂಜು ಎ. (ಅರಕಲಗೂಡು) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಕಲಗೂಡು ವಿಧಾನಸಭಾ ಕ್ಷೇತ್ರದ ಹಳ್ಳಿ ಮೈಸೂರು ಮತ್ತು ಮಲ್ಲಿಪಟ್ಟಣಗಳಲ್ಲಿ ನೂತನವಾಗಿ ಪೊಲೀಸ್ ಸ್ಟೇಷನ್ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭ ಮಾಡಲಾಗುವುದು?

ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ)

1) ಹಳ್ಳಿ ಮೈಸೂರು ಇಲ್ಲಿ ನೂತನವಾಗಿ ಪಲೋಸ್ ಠಾಣೆ ತೆರೆಯುವ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆ.

   There is a proposal before the Government to open a Police Station at Halli Mysore.

2) ಮಲ್ಲಿಪಟ್ಟಣ ಗ್ರಾಮದಲ್ಲಿ ಪೊಲೀಸ್‌ಠಾಣೆ ತೆರೆಯುವ ಪ್ರಸ್ತಾವನೆಯು ಎನ್.ಪಿ.ಸಿ. ವರದಿ ಶಿಫಾರಸ್ಸುಗಳನ್ವಯ ಸಾಕಷ್ಟು ಸಮರ್ಥನೆ ಇಲ್ಲದ ಕಾರಣ ಸದರಿ ಪೊಲೀಸ್ ಠಾಣೆಯನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

   Since the proposed Police Station at Mallipatna does not fulfil the recommendations made by the National